**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು-560001.**

ಸಂಖ್ಯೆ: DPI-CPIOC7-2(OT)/8/2025-E-1838189 ದಿನಾಂಕ: 30-06-2026

**::ಅವಧಿ ವಿಸ್ತರಣೆ ಸುತ್ತೋಲೆ ::**

ವಿಷಯ: **ಖಾಸಗಿ ಅನುದಾನಿತ/ ಅನುದಾನರಹಿತಶಾಲೆಗಳ 2025-26ನೇ ಸಾಲಿನ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಅರ್ಜಿ ಸಲ್ಲಿಸಲು ಅವಧಿಯನ್ನು ವಿಸ್ತರಿಸಿ ಅವಕಾಶ ಕಲ್ಪಿಸುವ ಕುರಿತು.**

ಉಲ್ಲೇಖ:

1. ಕರ್ನಾಟಕ ಶಿಕ್ಷಣ ಕಾಯ್ದೆ-1983. ಸೆಕ್ಷನ್-36
2. ಕರ್ನಾಟಕ ಶಿಕ್ಷಣ ಕಾಯ್ದೆ [ಖಾಸಗಿ ಶಾಲೆಗಳ ನೊದಣಿಮತ್ತುನಿಯಂತ್ರಣ] ನಿಯಮ-1999 ಸರ್ಕಾರದ ಅಧಿಸೂಚನೆ ಸಂಖ್ಯೆ :ಇಡಿ:137:ವಿವಿದ:98, ದಿನಾಂಕ: 19.05.1999
3. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009.
4. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು-2012.
5. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 709 ಪಿಜಿಸಿ 2017, ದಿನಾಂಕ: 08.03.2018[ಅಧಿಸೂಚನೆ-1] ಮತ್ತು ದಿ:07.03.2018 [ಅಧಿಸೂಚನೆ-2 ಮತ್ತು3]
6. ಈ ಕಛೇರಿಯ ಪತ್ರ ಸಂಖ್ಯೆ:DPI-CPIOC7-2(OT)/44/2023-E-117136 ದಿನಾಂಕ:19-09-2024.
7. ಈ ಕಛೇರಿಯ ಪತ್ರ ಸಂಖ್ಯೆ: DPI-CPIOC7-2(OT)/22/2024-E-1542608 ದಿನಾಂಕ:08-01-2025
8. ಈ ಕಛೇರಿಯ ಪತ್ರ ಸಂಖ್ಯೆ:DPI-CPIOC7-2(OT)/14/2024-E-1469456 ದಿನಾಂಕ:18-10-2025, 26-11-2025. DPI –CPIOC8-2(RR)/1/226-E-2026078 ದಿ:13-01-2026 , 16-02-2026, 27-03-2026, 21-04-2026 ಮತ್ತು 03-06-2026
9. ಸರ್ಕಾರದ ಆದೇಶ ಸಂಖ್ಯೆ: ಇಪಿ 1 ಪಿಜಿಸಿ 2026 (ಭಾಗ-1), ಬೆಂಗಳೂರು, ದಿನಾಂಕ: 15.05.2026ರ ಅಧಿಸೂಚನೆ-1, ಅಧಿಸೂಚನೆ-2 ಮತ್ತು ಅಧಿಸೂಚನೆ-3
10. ಸರ್ಕಾರದ ಆದೇಶ ಸಂಖ್ಯೆ: ಇಪಿ 1 ಪಿಜಿಸಿ 2026 (ಭಾಗ-1), ಬೆಂಗಳೂರು ದಿನಾಂಕ:15.05.2026
11. ಈ ಕಛೇರಿ ಸುತ್ತೋಲೆ ಸಂಖ್ಯೆ DPI-CPIOC7-2(OT)/11/2026-E-2131263 ದಿನಾಂಕ:04-06-2026

*****

ಮೇಲಿನ ವಿಷಯ ಹಾಗೂ ಉಲ್ಲೇಖ(8) ರ ಸುತ್ತೋಲೆಯಂತೆ 2025-26ನೇ ಸಾಲಿಗೆ ಖಾಸಗಿ ಶಾಲೆಗಳ ಪ್ರಥಮ ಮಾನ್ಯತೆ/ಮಾನ್ಯತೆ ನವೀಕರಣಕ್ಕೆ ಆಡಳಿತ ಮಂಡಳಿಗೆ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅಂತಿಮವಾಗಿ ಹಾಗೂ 07ನೇ ಬಾರಿಗೆ ದಿನಾಂಕ:03-06-2026 ರಂದು ಮೊದಲೇ ಆನ್ ಲೈನ್ ಅವಕಾಶ ಕಲ್ಪಿಸಿ ಹಾಗೂ ದಿನಾಂಕ:08-06-2026 ರಿಂದ 30-06-2026 ರವರೆಗೆ ಅವಧಿ ನಿಗದಿಪಡಿಸಿ ಆಡಳಿತ ಮಂಡಳಿಗಳಿಗೆ ಅವಕಾಶ ನೀಡಲಾಗಿತ್ತು. ದಿನಾಂಕ:30-06-2026 ರಂದು ತಂತ್ರಾಂಶದಲ್ಲಿ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯಾ ಮಾಹಿತಿಯನ್ನು ಪರಿಶೀಲಿಸಲಾಗಿ, ನಿಗದಿಪಡಿಸಿದ ಕಾಲಾವಕಾಶದೊಳಗೆ ಮಾನ್ಯತೆ ನವೀಕರಣ ಪಡೆಯಲು ಅರ್ಜಿ ಸಲ್ಲಿಸಲಾಗದೇ ಇರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖಿತ (9) ಮತ್ತು (10)ರನ್ವಯ ಖಾಸಗಿ ಶಾಲೆಗಳ ನೋಂದಣಿ, ಉನ್ನತೀಕರಣ ಹಾಗೂ ಮಾನ್ಯತೆ ನವೀಕರಣ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹೆಚ್ಚಿಸಲು ಸರಳೀಕರಣಗೊಳಿಸಲಾಗಿ, ಕೆಲವು ನಿಯಮಗಳಿಗೆ ತಿದ್ದುಪಡಿ/ ಬದಲಾವಣೆಯಾಗಿರುವುದರಿಂದ ಇಲಾಖಾ ವೆಬ್ ಸೈಟ್‌ನಲ್ಲಿ ತಿದ್ದುಪಡಿ/ಬದಲಾವಣೆಗಳನ್ನು ಇಂದೀಕರಿಸಿ ಮಾರ್ಪಾಡಿಸಿ ಹೊಸ ತಿದ್ದುಪಡಿ/ ಬದಲಾವಣೆಗಳಂತೆ ಆನ್‌ಲೈನ್ ವ್ಯವಸ್ಥೆಯನ್ನು ದಿನಾಂಕ:08-06-2026 ರಿಂದ ಚಾಲ್ತಿಗೊಳಿಸಲಾಗಿದೆ. ಹಾಗೂ ಹಿಂದಿನ ಮಾನದಂಡ/ ನಿಯಮಗಳಂತೆಯೂ ಸಹ 2025-26ನೇ ಸಾಲಿನ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣ ಅನುಮತಿ ನೀಡುವ ಕುರಿತು ಕ್ರಮವಹಿಸಬಹುದಾಗಿದೆ. ಉಲ್ಲೇಖ (11) ರಲ್ಲಿ ಈ ಕಛೇರಿಯಿಂದ ಹೊರಡಿಸಿರುವ ಸುತ್ತೋಲೆಯಲ್ಲಿ ತಿಳಿಯಪಡಿಸಿರುವ ಅಂಶಗಳಿಗೆ ನಿಗದಿತ ನಮೂನೆಯನ್ನು ಒದಗಿಸಿದ್ದು, ಅದರಂತೆ ದೃಢೀಕರಿಸಿ ಸಲ್ಲಿಸಲು ಸೂಚಿಸಿದೆ.

ಶಿಕ್ಷಣ ಕಾಯ್ದೆ ಮತ್ತು ನಿಯಮಗಳನುಸಾರ ಶಾಲೆಗಳನ್ನು ಅಧಿಕೃತ ಎಂದು ಪರಿಗಣಿಸಲು ಶಾಲೆಗಳು ಆಯಾ ಅವಧಿಯಲ್ಲಿ ಮಾನ್ಯತೆಯನ್ನು ನವೀಕರಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಮಾನ್ಯತೆ ನವೀಕರಿಸದಿದ್ದಲ್ಲಿ ಆರ್.ಟಿ.ಇ. ಶುಲ್ಕ ಮರುಪಾವತಿಗೆ ಪ್ರಸ್ತಾವನೆ ಪರಿಗಣಿಸಲು, ಅನುದಾನಿತ ಶಾಲಾ ಶಿಕ್ಷಕರ ವೇತನ ಪಾವತಿಗೆ ಅವಕಾಶವಿರುವುದಿಲ್ಲ. ಆದ್ದರಿಂದ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಸಕ್ಷಮಪ್ರಾಧಿಕಾರಿಗಳಾದ ಉಪನಿರ್ದೇಶಕರು(ಆಡಳಿತ) ಇವರು ವೈಯಕ್ತಿಕ ಗಮನಹರಿಸಿ ತಮ್ಮ ವ್ಯಾಪ್ತಿಯಲ್ಲಿ **ಈವರೆವಿಗೂ 2025-26ನೇ ಸಾಲಿಗೆ ಮಾನ್ಯತೆ ನವೀಕರಣ ಪಡೆಯಲು ಅಗತ್ಯ ದಾಖಲೆ/ ಮಾಹಿತಿಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸದಿರುವ ಶಾಲಾ ಆಡಳಿತ ಮಂಡಳಿಗಳಿಗೆ ಅವಧಿ ವಿಸ್ತರಣೆಯ ಬಗ್ಗೆ ಹೆಚ್ಚಿನ ರೀತಿಯಲ್ಲಿ ಪ್ರಚಾರ ಕೈಗೊಂಡು, ಪ್ರಸ್ತಾವನೆ ಸಲ್ಲಿಸಲು ಅಗತ್ಯ ಕ್ರಮವಹಿಸಲು ತಿಳಿಸಿದೆ.**

2025-26ನೇ ಸಾಲಿನಲ್ಲಿ ಪ್ರಥಮ ಮಾನ್ಯತೆ/ ಮಾನ್ಯತೆ ನವೀಕರಣವಾಗದಿರುವಂತಹ ಶಾಲಾ ಆಡಳಿತ ಮಂಡಳಿಗಳಿಗೆ ಅರ್ಜಿ ಸಲ್ಲಿಸಲು ದಿನಾಂಕ:30-06-2026 ರವರೆಗೆ ದಿನಾಂಕವನ್ನು ವಿಸ್ತರಿಸಿ ಅಂತಿಮ ಅವಕಾಶ ನೀಡಲಾಗಿದೆ. ವಿಸ್ತರಿಸಿದ ದಿನಾಂಕದೊಳಗೆ ಸೂಕ್ತ ದಾಖಲೆಗಳೊಂದಿಗೆ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಿ, ಮಾನ್ಯತೆ ಪಡೆಯುವಂತೆ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರು ಕ್ರಮವಹಿಸುವುದು. ಇದುವರೆಗೂ ಸ್ವೀಕೃತವಾದ ಅರ್ಜಿಗಳಲ್ಲಿ **OVER DUE** ಅರ್ಜಿಗಳನ್ನು ಇತ್ಯರ್ಥಪಡಿಸಲು ಅವಕಾಶ ಮಾಡಿಕೊಡಲಾಗಿದ್ದು, ಮುಂದೆ ಸಲ್ಲಿಕೆಯಾಗುವ ಅರ್ಜಿಗಳನ್ನು ಆಯಾದಿನವೇ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲು ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿ ವಿಳಂಬಕ್ಕೆ ಅವಕಾಶ ನೀಡದಂತೆ ಅರ್ಜಿಗಳನ್ನು ಇತ್ಯರ್ಥಪಡಿಸಲು ಅಗತ್ಯ ಕ್ರಮವಹಿಸಲು ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಚನೆ ನೀಡಿದೆ. ಉಳಿದಂತೆ ಉಲ್ಲೇಖ(2) ರಿಂದ (8) ರವರೆಗಿನ ಸುತ್ತೋಲೆಗಳಲ್ಲಿನ ಎಲ್ಲಾ ಅಂಶಗಳು ಯಥಾವತ್ತಾಗಿರುತ್ತವೆ.

**2025-26ನೇ ಸಾಲಿಗೆ ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಸಂಬಂಧ ಹೊಸದಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಿ ಅವಕಾಶ ನೀಡಿ ನಿಗದಿಪಡಿಸಿದ ವೇಳಾಪಟ್ಟಿ**

| ಕ್ರ.ಸಂ | ವಿವರ | ಅಧಿಕಾರಿಗಳು | ದಿನಾಂಕ |
|---|---|---|---|
| 01 | 2025-26ನೇ ಸಾಲಿಗೆ ಶಾಲಾ ಆಡಳಿತ ಮಂಡಳಿಗಳು ಆನ್‌ಲೈನ್ ಮೂಲಕ ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣಕ್ಕೆ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ಸಂಬಂಧಿಸಿದ ಆಡಳಿತ ಮಂಡಳಿಗಳ ಆಡಳಿತಾಧಿಕಾರಿಗಳು | ದಿ:01-07-2026 ರಿಂದ ದಿ:15- 07-2026 |
| 02 | ಉಪನಿರ್ದೇಶಕರ ಕಛೇರಿಯಲ್ಲಿ ಆನ್‌ಲೈನ್ ಮೂಲಕ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಲು | ವಿಷಯ ನಿರ್ವಾಹಕರು (DCW) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:02-07-2026 ರಿಂದ ದಿ:21-07-2026 |
| | | ಪತ್ರಾಂಕಿತ ಸಹಾಯಕರು (DOF) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:03-07-2026 ರಿಂದ ದಿ:28-07-2026 |
| 03 | ಉಪನಿರ್ದೇಶಕರು (ಆಡಳಿತ) ಇವರು ಆಕ್ಷೇಪಣೆ ಸಹಿತ ಅರ್ಜಿಗಳನ್ನು ಆಡಳಿತ ಮಂಡಳಿಗೆ ರೋಲ್ ಬ್ಯಾಕ್ ಮಾಡಲು ಕಾಲಾವಧಿ | ಉಪನಿರ್ದೇಶಕರು(ಆಡಳಿತ) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ:04-07-2026 ರಿಂದ ದಿ:03-08-2026 |
| 04 | ಆಡಳಿತ ಮಂಡಳಿಗಳು ಆಕ್ಷೇಪಣೆಯನ್ನು ಸರಿಪಡಿಸಿ, ಅರ್ಜಿಯನ್ನು ಆನ್‌ಲೈನ್ ಮೂಲಕ ಉಪನಿರ್ದೇಶಕರಿಗೆ ಹಿಂತಿರುಗಿಸಲು ಕೊನೆಯ ದಿನಾಂಕ | ಆಡಳಿತ ಮಂಡಳಿ ಅರ್ಜಿ ಸ್ವೀಕೃತ ದಿನಾಂಕದಿಂದ 07 ಕರ್ತವ್ಯದ ದಿನಗಳು | ದಿ:06-07-2026 ರಿಂದ ದಿ:11-08-2026 |
| 05 | ಸ್ವೀಕರಿಸಿದ ಅರ್ಜಿಗಳನ್ನು ಇತ್ಯರ್ಥಪಡಿಸಿ ಅರ್ಹರಿಗೆ ಮಾನ್ಯತೆ / ಮಾನ್ಯತೆ ನವೀಕರಿಸಿ, ನವೀಕರಣ ಪ್ರಮಾಣ ಪತ್ರವನ್ನು ನೀಡಲು ಅಥವಾ ತಿರಸ್ಕರಿಸಿದ್ದಲ್ಲಿ ತಿರಸ್ಕೃತ ಆದೇಶ ಕೊನೆಯ ದಿನಾಂಕ | ಉಪನಿರ್ದೇಶಕರು (ಆಡಳಿತ) ಅರ್ಜಿ ಸ್ವೀಕೃತ ದಿನಾಂಕದಿಂದ 05 ಕರ್ತವ್ಯದ ದಿನಗಳು | ದಿ: 07-07-2026 ರಿಂದ ದಿ: 18-08-2026 |

**ವಿಶೇಷ ಸೂಚನೆ:**

ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳನ್ನು ಮತ್ತು ಕಾಲಾವಧಿ ಮುಗಿದ ಕಾರಣ ನವೀಕರಿಸಿದ ಪರಿಷ್ಕೃತ ದಾಖಲೆಗಳನ್ನು ಆಡಳಿತ ಮಂಡಳಿಗಳು ಎಸ್.ಎ.ಟಿ.ಎಸ್ ನಲ್ಲಿ ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಅಪ್ ಲೋಡ್ ಮಾಡಿ ನಂತರ ಮಾನ್ಯತೆ ನವೀಕರಣಕ್ಕೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅಪ್ ಡೇಟ್ ಮಾಡುವುದು. ಅದರಲ್ಲಿನ ಮಾಹಿತಿಗಳನ್ನು ಪರಿಶೀಲಿಸಿ ಮಾನ್ಯತೆ ನವೀಕರಣಕ್ಕೆ ಪರಿಗಣಿಸಲಾಗುವುದು.

ಉಪನಿರ್ದೇಶಕರ ಕಛೇರಿಯಲ್ಲಿ ಪ್ರತಿ ಅರ್ಜಿ ಸ್ವೀಕರಿಸಿದ ನಂತರ ನಿಗದಿತ ಅವಧಿಗಿಂತ ಹೆಚ್ಚು ದಿನಗಳು ಲಾಗಿನ್‌ನಲ್ಲಿ ಬಾಕಿ ಉಳಿಸಿಕೊಳ್ಳುವಂತಿಲ್ಲ. ಉಪನಿರ್ದೇಶಕರು ಅರ್ಜಿಗಳಲ್ಲಿ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಪರಿಶೀಲಿಸಿ ಅಗತ್ಯಾನುಸಾರ ಅಂತಹ ಅರ್ಜಿಗಳನ್ನು ನಿಗದಿಪಡಿಸಿದ ದಿನದೊಳಗಾಗಿ ರೋಲ್ ಬ್ಯಾಕ್ ಮಾಡಿ (DEO ಲಾಗಿನ್‌ಗೆ ಬಂದ ದಿನದಿಂದ **05 ದಿನಗಳೊಳಗೆ)** ಆಡಳಿತ ಮಂಡಳಿಗೆ ಕಳುಹಿಸತಕ್ಕದ್ದು. ಇಲ್ಲವಾದಲ್ಲಿ ಅರ್ಜಿದಾರರು ಅವಕಾಶವಂಚಿತರಾಗುತ್ತಾರೆ. ಆಯಾ ಲಾಗಿನ್‌ನ ಸಿಬ್ಬಂದಿ/ಅಧಿಕಾರಿಗಳು ಇದರ ಜವಾಬ್ದಾರಿಯನ್ನು ಅರಿತು ನಿಗದಿತ ಕಾಲಮಿತಿಯಲ್ಲಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಎಚ್ಚರಿಕೆ ನೀಡಿದೆ. ಉಲ್ಲೇಖದಲ್ಲಿ ನೀಡಿರುವ ಮಾರ್ಗದರ್ಶನಗಳನ್ನು ಕಡ್ಡಾಯವಾಗಿ ಪಾಲಿಸಿ ಪ್ರಥಮ ಮಾನ್ಯತೆ/ ಮಾನ್ಯತೆಯನ್ನು ನವೀಕರಿಸಲು ಸೂಚಿಸಿದೆ. ಒಂದು ವೇಳೆ ಮಾನ್ಯತೆ ನವೀಕರಿಸುವ ಬಗ್ಗೆ ನಿಯಮ ಉಲ್ಲಂಘನೆಯಾದಲ್ಲಿ ಅಥವಾ ಅನಗತ್ಯ ವಿಳಂಬ ಅಥವಾ ಇತರೆ ಆಧಾರದ ಮೇಲೆ ದೂರುಗಳು ಬಂದಲ್ಲಿ ತಮ್ಮ ಮೇಲೆ ಸೂಕ್ತ ಶಿಸ್ತುಕ್ರಮ ಜರುಗಿಸಲಾಗುವುದು.

ತಮ್ಮ ಜಿಲ್ಲೆಯ ಯಾವುದೇ ಶಾಲೆಯು ಮಾನ್ಯತೆ ನವೀಕರಿಸದ ಶಾಲೆಗಳು ಅನಧಿಕೃತ ಎಂದು ಪರಿಗಣಿಸಲು ಕಾರಣರಾದಲ್ಲಿ ಆಯಾ ಜಿಲ್ಲಾ ಉಪನಿರ್ದೇಶಕರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.

**ಆಯುಕ್ತರು**
ಶಾಲಾ ಶಿಕ್ಷಣ ಇಲಾಖೆ.
ಬೆಂಗಳೂರು

**ಇವರಿಗೆ:**

01. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆ) ರವರುಗಳಿಗೆ ಅಗತ್ಯ ಕ್ರಮಕ್ಕಾಗಿ.
02. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ. [ಇವರು ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲಾ ಆಡಳಿತ ಮಂಡಳಿ ಹಾಗೂ ಶಾಲಾ ಮುಖ್ಯಸ್ಥರುಗಳಿಗೆ ಸುತ್ತೋಲೆಯನ್ನು ತಲುಪಿಸುವುದು]

**ಪ್ರತಿಯನ್ನುಮಾಹಿತಿಗಾಗಿ.**

01. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
02. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ ವಿಭಾಗ.
03. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
04. ಹಿರಿಯ ಸಹಾಯಕ ನಿರ್ದೇಶಕರು, ಎಸ್.ಎ.ಟಿ.ಎಸ್., ವಿಭಾಗ, ಇವರು ತಂತ್ರಾಂಶವನ್ನು ಬಿಡುಗಡೆ ಮಾಡುವುದು ಹಾಗೂ ತಂತ್ರಾಂಶವು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ನಿಗಾವಹಿಸುವುದು.
05. ಕಛೇರಿ ಪ್ರತಿ.